ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ರೈತರ ಕೃಷಿ ಭೂಮಿಗೆ ಕೊಳವೆ ಬಾವಿಯಿಂದ ನೀರು ಹರಿಸುವ ಸಂಬಂಧ ವಿದ್ಯುತ್ ಸಂಪರ್ಕ (ಟಿ.ಸಿ.) ನೀಡುವ ಕುರಿತು

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

62(458) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಮಂಡ್ಯ ಜಿಲ್ಲೆ ನಾಗಮಂಗಲ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ರೈತರ ಕೃಷಿ ಭೂಮಿಗೆ ಕೊಳವೆ ಬಾವಿಯಿಂದ ನೀರು ಹರಿಸುವ ಸಂಬಂಧ ವಿದ್ಯುತ್ ಸಂಪರ್ಕ (ಟಿ.ಸಿ) ನೀಡಲು ಯಾವ ಹೊಸ ಯೋಜನೆ ಕೈಗೊಳ್ಳಲಾಗಿದೆ; (ಯೋಜನೆಗೆ ಸಂಬಂಧಿಸಿದ ಸುತ್ತೋಲೆ ನೀಡುವುದು)

(ಆ) ನಾಗಮಂಗಲ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಈ ಯೋಜನೆಯನ್ನು ನಿರ್ವಹಿಸುತ್ತಿರುವ ಗುತ್ತಿಗೆದಾರರು ಯಾರು ; ಅಂದಾಜು ಮೊತ್ತವೆಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ರೈತರ ಕೃಷಿ ಭೂಮಿಯ ಪಂಪ್‌ಸೆಟ್‌ಗೆ ಸಂಪರ್ಕ ಕಲ್ಪಿಸುವ ಟ್ರಾನ್ಸ್‌ಫಾರ್ಮರ್ (ಟಿ.ಸಿ) ಹಾಳಾದರೆ ಎಷ್ಟು ದಿನಗಳಲ್ಲಿ ಬದಲಾವಣೆ ಮಾಡಿ ಹೊಸ/ರಿಪೇರಿ ಮಾಡಲಾದ ಟಿ.ಸಿ. ಅಳವಡಿಸಲಾಗುವುದು; (ಸರ್ಕಾರದ ಸುತ್ತೋಲೆ ಒದಗಿಸುವುದು)

(ಈ) ಈ ಸಂಬಂಧ ಹಾಳಾದ/ಕೆಟ್ಟಿರುವ ಟಿ.ಸಿ. ಬದಲಾವಣೆ ಮಾಡಲು ನಾಗಮಂಗಲ ತಾಲ್ಲೂಕು ಹೊಣಕೆರೆ ಹೋಬಳಿಯ ಕಿರಿಯ ಅಭಿಯಂತರರು ರೈತರಿಂದ ಹಣ ಕೇಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ?